ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ

ದಿನಾಂಕ : DATE : 13/9/20

# ವಿದ್ಯಾರ್ಥಿಗಳಿಗೆ ಮೊಬೈಲ್ ನೀಡಲು ಚಿಂತನೆ



■ ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಮೊಬೈಲ್ ಕೊಡುವ ಬಗ್ಗೆ ಸರಕಾರ ಚಿಂತನೆ

■ ಬೀದಿಬದಿ ವ್ಯಾಪಾರ ಮಾಡುವವರಿಗೆ 50 ಸಾವಿರ ರೂ., ಘಟಕ ವೆಚ್ಚದಲ್ಲಿ 25 ಸಾವಿರ ರೂ. ಸಹಾಯಧನ, 25 ಸಾವಿರ ರೂ. ಸಾಲ ನೀಡುವ ಯೋಜನೆ

**ದಾವಣಗೆರೆ:** ಪ್ರಸ್ತುತ ಎಲ್ಲೆಡೆ ಆನ್‌ಲೈನ್ ಶಿಕ್ಷಣಕ್ಕೆ ಒತ್ತು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಮೊಬೈಲ್ ಕೊಡುವ ಬಗ್ಗೆ ಸರಕಾರ ಚಿಂತನೆ ನಡೆಸಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವ ಗೋವಿಂದ ಕಾರಜೋಳ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬೀದಿಬದಿ ಸಣ್ಣಪುಟ್ಟ ವ್ಯಾಪಾರ ಮಾಡುವವರಿಗೆ ಪ್ರಸಕ್ತ ಸಾಲಿನಲ್ಲಿ 50 ಸಾವಿರ ರೂ. ಘಟಕ ವೆಚ್ಚದಲ್ಲಿ 25 ಸಾವಿರ ರೂ. ಸಹಾಯಧನ, 25 ಸಾವಿರ ರೂ. ಸಾಲ ನೀಡುವ ಯೋಜನೆ ರೂಪಿಸಲಾಗಿದೆ. ಬ್ಯಾಂಕ್ ಲಿಂಕ್ಡ್ ಸ್ವಯಂ ಉದ್ಯೋಗ ಚಟುವಟಿಕೆಗೆ ಒಂದು ಲಕ್ಷ ರೂ. ಸಹಾಯಧನ ನೀಡಲಾಗುವುದು. ಇದರ ಜತೆಗೆ ಗಂಗಾಕಲ್ಯಾಣ, ಭೂ ಖರೀದಿ, ಮೈಕ್ರೋ ಕ್ರೆಡಿಟ್ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈಗಷ್ಟೇ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು ಮುಂದೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಎಂದರು.

ಪ್ರಸಕ್ತ ಸಾಲಿನಲ್ಲಿ ಸಮಾಜಕಲ್ಯಾಣ ಇಲಾಖೆಗೆ 27,700 ಕೋಟಿ ರೂ.ಹಂಚಿಕೆ ಮಾಡಲಾಗಿದೆ. ಕೋವಿಡ್ ಕಾರಣದಿಂದ ಶಾಲಾ-ಕಾಲೇಜು, ವಸತಿ ಶಾಲೆ, ವಿದ್ಯಾರ್ಥಿ ನಿಲಯಗಳು ಆರಂಭವಾಗದೆ ಸಾಧನೆ ಕೇವಲ ಶೇ.6 ರಷ್ಟಾಗಿದೆ. ಪ್ರಸಕ್ತ ಸಾಲಿನಲ್ಲಿ ಕೈಗೆತ್ತಿಕೊಂಡ 169 ವಸತಿಶಾಲೆ ಹಾಗೂ 161 ವಿದ್ಯಾರ್ಥಿ ನಿಲಯ ಕಟ್ಟಡ ನಿರ್ಮಾಣದಲ್ಲಿ 59 ವಸತಿ ಶಾಲೆ ಹಾಗೂ 96 ವಿದ್ಯಾರ್ಥಿ ವಸತಿನಿಲಯಗಳು ಪೂರ್ಣಗೊಂಡಿವೆ ಎಂದು ಹೇಳಿದರು.

**ರಾಜ್ಯಾದ್ಯಂತ ಏಕ ದರಪಟ್ಟಿ:** ಲೋಕೋಪಯೋಗಿ ಇಲಾಖೆಯ ಕಟ್ಟಡ ನಿರ್ಮಾಣ ಕಾಮಗಾರಿಯ ದರಪಟ್ಟಿ ಈ ಮೊದಲು ರಾಜ್ಯದ 4 ಕಂದಾಯ ವಿಭಾಗಗಳಲ್ಲಿ ಒಂದೊಂದು ರೀತಿಯಲ್ಲಿತ್ತು. ಈಗ ರಾಜ್ಯಾದ್ಯಂತ ಏಕರೂಪದ ದರಪಟ್ಟಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗಿದೆ. ಅಂತರ್ಜಲ ವೃದ್ಧಿ ಹಾಗೂ ಜಾನುವಾರುಗಳ ಕುಡಿಯುವ ನೀರಿಗೆ ಅನುಕೂಲವಾಗುವಂತೆ ಸೇತುವೆಗಳ ತಳಭಾಗದಲ್ಲಿ ಒಂದು ಮೀಟರ್ ನೀರಿನ ಸಂಗ್ರಹಣೆಗೆ ಒತ್ತು ನೀಡಲಾಗಿದೆ ಎಂದು ತಿಳಿಸಿದರು.

**ಸಂಪನ್ಮೂಲ ವ್ಯಕ್ತಿಯಾಗಿ ಗುರುರಾಜ ಕರ್ಜಗಿ:** ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿರುವ ಮಕ್ಕಳಲ್ಲಿ ಶಿಕ್ಷಣ ಹಾಗೂ ಅಧ್ಯಯನಾಸಕ್ತಿ ಮೂಡಿಸಬೇಕಿದೆ. ಸರಿಯಾದ ಅಧ್ಯಯನ ಕ್ರಮ, ಓದಿನ ಶಿಸ್ತು, ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಪೂರಕ ಮಾರ್ಗದರ್ಶನ ನೀಡಲು ಖ್ಯಾತ ಶಿಕ್ಷಣ ತಜ್ಞ ಡಾ|ಗುರುರಾಜ ಕರ್ಜಗಿ ಅವರನ್ನು ಸಂಪನ್ಮೂಲ ವ್ಯಕ್ತಿಯನ್ನಾಗಿ ಸರಕಾರ ನೇಮಿಸಿಕೊಂಡಿದೆ ಎಂದು ಕಾರಜೋಳ ತಿಳಿಸಿದರು.